# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಕಾರ್ಯದರ್ಶಿ, ವಾರ್ಡ್ ಸಮಿತಿ /ಸಹಾಯಕ ಇಂಜಿನಿಯರ್‌ರವರ ಕಛೇರಿ, ವೃಷಭಾವತಿನಗರ ವಾರ್ಡ್–102,
3ನೇ ಮುಖ್ಯರಸ್ತೆ, ಬಿ.ಇ.ಎಮ್.ಎಲ್. ಲೇಔಟ್, ಬೆಂಗಳೂರು–79.

**ಸಂಖ್ಯೆ: ವಾ–102/ವಾ.ಸ./ಸಭಾನಡವಳಿ–20/2021–22** **ದಿನಾಂಕ: 07/08/2021**

**–:ಸಭೆಯ ನಡವಳಿಗಳು:–**

ಮಾನ್ಯ ನೋಡಲ್ ಅಧಿಕಾರಿಯವರ ಆದೇಶದಂತೆ, ದಿನಾಂಕ: 07/08/2021 ಶನಿವಾರದಂದು ಬೆಳಿಗ್ಗೆ 10.00 ಘಂಟೆಗೆ ವಾರ್ಡ್–102 ವೃಷಭಾವತಿನಗರ ವಾರ್ಡ್ ಮಟ್ಟದ ಸಮಿತಿ ಸಭೆಯನ್ನು ಆಯೋಜಿಸಲಾಯಿತು.

ಶ್ರೀ ಜಿ.ಪ್ರಕಾಶ್ ಸಮಿತಿಯ ಕಾರ್ಯದರ್ಶಿಗಳು ರವರು ಸಭೆಯನ್ನು ನಡೆಸುತ್ತಾ, ಸಾರ್ವಜನಿಕರ ಕುಂದು ಕೊರತೆಗಳು ಹಾಗೂ ವಾರ್ಡ್ ಅಭಿವೃದ್ಧಿಗೆ ಸಂಬಂದಿಸಿದಂತೆ ಹಾಗೂ ಕೋವಿಡ್–19 ವೈರಸ್‌ನ ಸೋಂಕಿನ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವುದು, ಮೂಲಭೂತ ಸೌಕರ್ಯಗಳನ್ನು ಒದಗಿಸಲು ಹಾಗೂ ಸಾರ್ವಜನಿಕರ ಹಿತರಕ್ಷಣೆಗಾಗಿ ವಿಶೇಷ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಬಗ್ಗೆ ಚರ್ಚಿಸಲು ಸಭೆಯಲ್ಲಿ ಉಪಸ್ಥಿತರಾಗಿರುವ ಮಾನ್ಯ ನೋಡಲ್ ಅಧಿಕಾರಿಯವರಿಗೆ ಮತ್ತು ಸಭೆಗೆ ಆಗಮಿಸಿರುವ ಎಲ್ಲಾ ಅಧಿಕಾರಿಗಳಿಗೆ ಸಭೆಗೆ ಸ್ವಾಗತ ಕೋರುತ್ತಾ, ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ಸಭೆಯನ್ನು ಮುನ್ನಡೆಸಲಾಯಿತು.

**ಸಭೆಗೆ ಹಾಜರಿದ್ದವರು:**

| | |
|---|---|
| **1** | ಶ್ರೀ. ಕೆ. ವಿಜಯ್ ಶೇಖರ್<br>ನೋಡಲ್ ಅಧಿಕಾರಿಗಳು ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರು, ವಾರ್ಡ್–102 |
| **2** | ಶ್ರೀ ಜಿ. ಪ್ರಕಾಶ್, ಕಾರ್ಯದರ್ಶಿ ಮತ್ತು ಸಂಚಾಲಕರು, ವಾರ್ಡ್ ಸಮಿತಿ ವಾ–102 ಹಾಗೂ ಸಹಾಯಕ ಅಭಿಯಂತರರು, ವಾರ್ಡ್–102. |
| **3** | ಶ್ರೀ ಜಿ.ಆರ್.ಗೋವಿಂದ ರಾಜುಲು, ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್–102 |
| **4** | ಶ್ರೀ ಬಾಬು, ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್–102. |
| **5** | ಶ್ರೀ ಶೇಖರ್ ನಾಯಕ್, ಸಹಾಯಕ ಅಭಿಯಂತರರು, ಬಿಡಬ್ಲ್ಯೂಎಸ್‌ಎಸ್‌ಬಿ. ಎನ್‌ಡಬ್ಲ್ಯು–2 |
| **6** | ಶ್ರೀ ಹರೀಶ್, ಟ್ಯಾಕ್ಸ್ ಇನ್ಸ್‌ಪೆಕ್ಟರ್, ವಾರ್ಡ್–102 |
| **7** | ಶ್ರೀ ಹೆಚ್. ಪದ್ಮರಾಜು, ಎ.ಎಸ್.ಐ. ಬಸವೇಶ್ವರನಗರ ಪೊಲೀಸ್ ಠಾಣೆ. |
| **8** | ಶ್ರೀ ರಾಘವೇಂದ್ರ ಕೆ. ಬಿಡಬ್ಲ್ಯೂಎಸ್‌ಎಸ್‌ಬಿ, ಗುತ್ತಿಗೆದಾರರು. |
| **9** | ಶ್ರೀ ಸುನೀಲ್, ವಾರ್ಡ್ ಮಾರ್ಷಲ್, ವಾರ್ಡ್–102. |
| **10** | ಶ್ರೀಮತಿ ಪ್ರೇಮ, ಸದಸ್ಯರು, ವಾರ್ಡ್ ಸಮಿತಿ ವಾರ್ಡ್–102. |
| **11** | ಶ್ರೀ ರಾಜ್ ಕುಮಾರ್, ಸದಸ್ಯರು, ವಾರ್ಡ್ ಸಮಿತಿ ವಾರ್ಡ್–102. |
| **12** | ಶ್ರೀ ದೇವರಾಜು, ಸದಸ್ಯರು, ವಾರ್ಡ್ ಸಮಿತಿ ವಾರ್ಡ್–102. |
| **13** | ಶ್ರೀ ಚಂದ್ರಪ್ಪ, ಸದಸ್ಯರು, ವಾರ್ಡ್ ಸಮಿತಿ ವಾರ್ಡ್–102. |
| **14** | ಶ್ರೀ ರಂಗನಾಥ್, ಸದಸ್ಯರು, ವಾರ್ಡ್ ಸಮಿತಿ ವಾರ್ಡ್–102. |

ಮು.ತಿ.ನೋ.

**ಸಭೆಯಲ್ಲಿ ಚರ್ಚಿಸಲಾದ ವಿಷಯಗಳು:**

**1) ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ:-**

- ಮಾನ್ಯ ನೋಡಲ್ ಅಧಿಕಾರಿಯವರು ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ ಮಾತನಾಡುತ್ತಾ, ವಾರ್ಡ್-102 ವೃಷಭಾವತಿನಗರದಲ್ಲಿ ಕೋವಿಡ್-19ಗೆ ಸಂಭಂಧಿಸಿದಂತೆ ಮಾಹಿತಿಗಳ ವಿವರಣೆ ನೀಡುವಂತೆ ಸಭೆಯಲ್ಲಿ ತಿಳಿಸಿದರು.
- ಶ್ರೀಗೋವಿಂದರಾಜುಲು, ಹಿರಿಯ ಆರೋಗ್ಯ ಪರಿವೀಕ್ಷಕರು ರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಪ್ರತಿನಿತ್ಯ 200 ಕ್ಕಿಂತ ಹೆಚ್ಚು ಜನರಿಗೆ ಕೋವಿಡ್ ಪರೀಕ್ಷೆಗಳನ್ನು ಕೈಗೊಳ್ಳುತ್ತಿರುವುದಾಗಿ ತಿಳಿಸುತ್ತಾ, ಕಳೆದ 15 ದಿನಗಳಿಂದ ಕೋವಿಡ್ ಸೋಂಕಿತರ ಸಂಖ್ಯೆಯು ಇಳಿಕೆಯಾಗಿದ್ದು, 23 ಆಕ್ಟಿವ್ ಕೇಸ್‌ಗಳಿರುತ್ತವೆ ಅದರಲ್ಲಿ 19 ಜನರು ಹೋಮ್ ಐಸೋಲೇಷನ್ ಮತ್ತು 04 ಜನರು ಆಸ್ಪತ್ರೆಯಲ್ಲಿರುತ್ತಾರೆ. ಮತ್ತು ಯಾವುದೇ ಸಾವು ಸಂಭವಿಸಿರುವುದಿಲ್ಲ ಎಂದು ಸಭೆಯಲ್ಲಿ ತಿಳಿಸಿದರು.
- ಮಾನ್ಯ ನೋಡಲ್ ಅಧಿಕಾರಿಯವರು ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್-19 3ನೇ ಅಲೆಯನ್ನು ತಡೆಗಟ್ಟಲು ತೆಗೆದುಕೊಂಡಿರುವ ಕ್ರಮಗಳನ್ನು ಸಭೆಯಲ್ಲಿ ತಿಳಿಸುವಂತೆ ಹೇಳಿದರು.
- ಶ್ರೀ ಗೋವಿಂದರಾಜುಲು, ಹಿರಿಯ ಆರೋಗ್ಯ ಪರಿವೀಕ್ಷಕರು ರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯ ಮಣಿವಿಲಾಸನ್ ಗಾರ್ಡನ್‌ನಲ್ಲಿ ಒಂದೇ ಮನೆಯಲ್ಲಿ 04 ಕೇಸ್‌ಗಳು ಪತ್ತೆಯಾಗಿದ್ದು, ಮೈಕ್ರೋ ಕಂಟೈನ್‌ಮೆಂಟ್ ಜೋನ್ ಆಗಿ ಮಾಡಲಾಗಿದೆ ಎಂದು ಸಭೆಯಲ್ಲಿ ತಿಳಿಸಿದರು.
- ಮಾನ್ಯ ನೋಡಲ್ ಅಧಿಕಾರಿಯವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿನ ಸಭೆ ಸಮಾರಂಭಗಳು ನಡೆಯದಂತೆ ಕ್ರಮವಹಿಸಲು ಕಲ್ಯಾಣ ಮಂಟಪಗಳು ಹಾಗೂ ಪಾರ್ಟಿ ಹಾಲ್‌ಗಳಿಗೆ ನೋಟೀಸ್ ನೀಡುವುದು ಮತ್ತು ಹೆಚ್ಚಾಗಿ ಜನ ಸೇರುವ ಸ್ಥಳಗಳಲ್ಲಿ ಹೆಚ್ಚು ಕಣ್ಗಾವಲು ಇಟ್ಟು ಸಾಮಾಜಿಕ ಅಂತರ ಪಾಲಿಸದವರಿಗೆ ಹಾಗೂ ಮಾಸ್ಕ್ ಧರಿಸದವರಿಗೆ ಸರ್ಕಾರದ ಆದೇಶದಂತೆ ದಂಡ ವಿಧಿಸಲು ಕ್ರಮ ತೆಗೆದುಕೊಳ್ಳಬೇಕಾಗಿ ಸಭೆಯಲ್ಲಿ ತಿಳಿಸಿದರು.
- ಶ್ರೀಗೋವಿಂದರಾಜುಲು, ಹಿರಿಯ ಆರೋಗ್ಯ ಪರಿವೀಕ್ಷಕರು ರವರು ಮಾತನಾಡುತ್ತಾ, ಸಭೆ ಸಮಾರಂಭಗಳು ನಡೆಯದಂತೆ ಕಲ್ಯಾಣ ಮಂಟಪಗಳು ಹಾಗೂ ಪಾರ್ಟಿ ಹಾಲ್‌ಗಳಿಗೆ ಎಚ್ಚರಿಕೆ ನೀಡುವುದು ಹಾಗೂ ಮಾರ್ಷಲ್ಸ್‌ಗಳಿಂದ ಸಾಮಾಜಿಕ ಅಂತರ ಪಾಲಿಸದವರಿಗೆ ಹಾಗೂ ಮಾಸ್ಕ್ ಧರಿಸದವರಿಗೆ ಸರ್ಕಾರದ ಆದೇಶದಂತೆ ದಂಡ ವಿಧಿಸಲಾಗುತ್ತಿರುವುದಾಗಿ ಸಭೆಯಲ್ಲಿ ತಿಳಿಸುತ್ತಾ, ವಾರ್ಡ್ ವ್ಯಾಪ್ತಿಯಲ್ಲಿನ ಅಪಾರ್ಟ್‌ಮೆಂಟ್‌ಗಳಲ್ಲಿ ಕೋವಿಡ್ ಪರೀಕ್ಷೆಗಳನ್ನು ನಡೆಸಲಾಗುತ್ತಿದ್ದು, ಸ್ಯಾನಿಟೈಜೇಷನ್ ಮಾಡಲಾಗುತ್ತಿರುವುದಾಗಿ ಸಭೆಯಲ್ಲಿ ತಿಳಿಸಿದರು.

**2) ಅಭಿಯಂತರರ ವಿಭಾಗದ ಬಗ್ಗೆ:-**

- ಶ್ರೀ ರಂಗನಾಥ್, ಸದಸ್ಯರು ರವರು ಮಾತನಾಡುತ್ತಾ, ಗಂಗಣ್ಣ ಬಡಾವಣೆಯ ಮುನೇಶ್ವರ ದೇವಸ್ಥಾನದ ರಸ್ತೆಯಲ್ಲಿ ರಸ್ತೆ ಅಗೆತದಿಂದಾಗಿ ರಸ್ತೆಯಲ್ಲಿ ಗುಂಡಿಗಳು ಹೆಚ್ಚಾಗಿದ್ದು ರಸ್ತೆಯು ಹಾಳಾಗಿರುತ್ತದೆ. ಇದರಿಂದಾಗಿ ಸಾರ್ವಜನಿಕರಿಗೆ ಸಂಚರಿಸಲು ತೊಂದರೆಯಾಗುತ್ತಿರುವುದಾಗಿ ಸಭೆಯಲ್ಲಿ ದೂರಿದರು.
- ಮಾನ್ಯ ನೋಡಲ್ ಅಧಿಕಾರಿ ರವರು ಮಾತನಾಡುತ್ತಾ, ಸದರಿ ರಸ್ತೆಯನ್ನು ಪರಿಶೀಲಿಸಿ ಸೂಕ್ತ ಕ್ರಮವಹಿಸುವಂತೆ ವಾರ್ಡ್ ಸಹಾಯಕ ಅಭಿಯಂತರರಿಗೆ ತಿಳಿಸಿದರು.
- ಸಹಾಯಕ ಅಭಿಯಂತರರು ವಾರ್ಡ್-102 ರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಅಭಿವೃದ್ಧಿ ಕಾಮಗಾರಿಗಳು ಪ್ರಗತಿಯಲ್ಲಿದ್ದು, ಮುಂದಿನ ದಿನಗಳಲ್ಲಿ ಸದಸ್ಯರು ಕೋರಿರುವಂತಹ ರಸ್ತೆಯನ್ನು ಅಭಿವೃದ್ಧಿ ಪಡಿಸಲಾಗುವುದು ಎಂದು ಸಭೆಯಲ್ಲಿ ಕೋರಿದರು.

**3) ಘನತ್ಯಾಜ್ಯ ನಿರ್ವಹಣೆ ವಿಭಾಗದ ಬಗ್ಗೆ:-**

- ಶ್ರೀ ದೇವರಾಜು, ಸದಸ್ಯರು ರವರು ಮಾತನಾಡುತ್ತಾ, ಸಾರ್ವಜನಿಕರು ಬೀದಿ ಬದಿಯಲ್ಲಿ ಕಸವನ್ನು ಬಿಸಾಡುವುದು ಹಾಗೂ ಚರ್ಚ್ ರಸ್ತೆಯಲ್ಲಿ ರಾತ್ರಿ ವೇಳೆಯಲ್ಲಿ ಸಾರ್ವಜನಿಕರು ಕಸವನ್ನು ಹಾಕಿರುತ್ತಾರೆ ಎಂದು ಸಭೆಯಲ್ಲಿ ದೂರಿದರು.

- ಶ್ರೀ ಬಾಬು, ಕಿರಿಯ ಆರೋಗ್ಯ ಪರಿವೀಕ್ಷಕರು ರವರು ಮಾತನಾಡುತ್ತಾ, ಬೀದಿ ಬದಿಯಲ್ಲಿ ಕಸ ಗುಡಿಸುವುದು ಪ್ರತೀ ರಸ್ತೆಯಲ್ಲಿ ಮನೆ ಮನೆಗೆ ತೆರಳಿ ಆಟೋಗಳಲ್ಲಿ ಹಸಿ ಕಸ ಹಾಗೂ ಒಣ ಕಸವನ್ನು ಸ್ವೀಕರಿಸುವುದು ದಿನ ನಿತ್ಯ ಪ್ರಗತಿಯಲ್ಲಿರುತ್ತದೆ. ಆದರೆ ಕೆಲವು ಸಾರ್ವಜನಿಕರು ರಾತ್ರಿ ವೇಳೆಯಲ್ಲಿ ಚರ್ಚ್ ರಸ್ತೆ ಹಾಗೂ ಕೆಲವು ಭಾಗಗಳಲ್ಲಿ ಹಸಿ ಕಸ ಮತ್ತು ಒಣ ಕಸವನ್ನು ಬೇರ್ಪಡಿಸದೇ ರಸ್ತೆ ಬದಿಯಲ್ಲಿ ಬಿಸಾಡಿರುತ್ತಾರೆ ಇಂತಹ ಪ್ರಕರಣಗಳನ್ನು ತಡೆಯಲು ರಾತ್ರಿ ಪಾಳಿಯಲ್ಲಿ ಮಾರ್ಷಲ್‌ಗಳು ಕಾರ್ಯಾಚರಣೆ ಕೈಗೊಂಡು ಕೆಲವು ಸಾರ್ವಜನಿಕರಿಂದ ದಂಡವನ್ನು ವಸೂಲಿ ಮಾಡಿರುತ್ತಾರೆ. ಆದರೂ ಸಹ ಇಂತಹ ಘಟನೆಗಳು ಮರುಕಳಿಸುತ್ತಿರುತ್ತವೆ. ಆದುದರಿಂದ ಸಾರ್ವಜನಿಕರಿಗೆ ಇದರ ಬಗ್ಗೆ ಅರಿವು ಮೂಡಿಸಲು ವಾರ್ಡ್ ವ್ಯಾಪ್ತಿಯಲ್ಲಿ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಸಭೆಯಲ್ಲಿ ತಿಳಿಸಿದರು.
- ವಾರ್ಡ್ ಸಮಿತಿ ಸದಸ್ಯರುಗಳಾದ ಶ್ರೀಮತಿ ಪ್ರೇಮ, ಶ್ರೀ ರಂಗನಾಥ್ ಹಾಗೂ ಶ್ರೀ ರಾಜ್‌ಕುಮಾರ್ ರವರುಗಳು ಮಾತನಾಡುತ್ತಾ, 6ನೇ ಮುಖ್ಯರಸ್ತೆಯಲ್ಲಿರುವ ಮಾರ್ಕೆಟ್ ರಸ್ತೆ ಹಾಗೂ 11ನೇ ಮುಖ್ಯರಸ್ತೆಯ ವಿದ್ಯಾಶ್ರೀ ವೈನ್ಸ್ ಮುಂಭಾಗದಲ್ಲಿ ಹೆಚ್ಚಿನ ಜನಸಂದಣಿ ಉಂಟಾಗುತ್ತಿದ್ದು ಸಾರ್ವಜನಿಕರು ಮಾಸ್ಕ್ ಅನ್ನು ಸರಿಯಾದ ರೀತಿಯಲ್ಲಿ ಧರಿಸದೇ ಇರುವುದು ಹಾಗೂ ಸಾಮಾಜಿಕ ಅಂತರವನ್ನು ಕಾಯ್ದುಕೊಳ್ಳದೇ ಇರುವುದು ಕಂಡುಬಂದಿರುತ್ತದೆ. ಇದರಿಂದ ಕೋವಿಡ್ ಸಾಂಕ್ರಾಮಿಕ ರೋಗ ಹರಡಲು ದಾರಿ ಮಾಡಿಕೊಟ್ಟಂತಾಗುತ್ತದೆ. ಆದುದರಿಂದ ಇದರ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಬೇಂಕೆಂದು ಸಭೆಯಲ್ಲಿ ಕೋರಿದರು.
- ಶ್ರೀ ಬಾಬು ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್–102 ರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಮಾರ್ಷಲ್‌ಗಳು ಮತ್ತು ಪೊಲೀಸ್ ಸಿಬ್ಬಂದಿಗಳ ಸಹಯೋಗದೊಂದಿಗೆ ಜಂಟಿ ಕಾರ್ಯಾಚರಣೆ ನಡೆಸುತ್ತಿದ್ದು, ಅಂತಹ ವ್ಯಕ್ತಿಗಳಿಗೆ ದಂಡ ವಿಧಿಸುವುದು ಹಾಗೂ ಸಾರ್ವಜನಿಕರಿಗೆ ತಿಳುವಳಿಕೆ ನೀಡುವುದು ಹಾಗೂ ಮುಂಜಾಗ್ರತ ಕ್ರಮ ಕೈಗೊಳ್ಳುವಂತೆ ಸೂಚಿಸುತ್ತಿರುವುದಾಗಿ ಸಭೆಯಲ್ಲಿ ತಿಳಿಸಿದರು.

**4) <u>ಕಂದಾಯ ವಿಭಾಗದ ಬಗ್ಗೆ:–</u>**

- ಮಾನ್ಯ ನೋಡಲ್ ಅಧಿಕಾರಿಯವರು ಮಾತನಾಡುತ್ತಾ, ವಾರ್ಡ್‌ನಲ್ಲಿ ಕಂದಾಯ ವಸೂಲಿ ಮಾಡಲು ತೆಗೆದುಕೊಂಡಿರುವ ಸೂಕ್ತ ಕ್ರಮಗಳ ಬಗ್ಗೆ ವರದಿಗಳನ್ನು ನೀಡುವಂತೆ ಸಭೆಯಲ್ಲಿ ಹಾಜರಿದ್ದ ತೆರಿಗೆ ಪರಿವೀಕ್ಷಕರಿಗೆ ಸೂಚಿಸಿದರು.
- ಸಭೆಯಲ್ಲಿ ಹಾಜರಿದ್ದ ಶ್ರೀ ಹರೀಶ್, ಟ್ಯಾಕ್ಸ್ ಇನ್ಸ್‌ಪೆಕ್ಟರ್ ವಾರ್ಡ್–102 ರವರು ಮಾತನಾಡುತ್ತಾ, ಈವರೆಗೂ ವಾರ್ಡ್‌ನಲ್ಲಿನ ಸಾರ್ವಜನಿಕರು ಸರಿಯಾದ ರೀತಿಯಲ್ಲಿ ಬಾಕಿ ಹಾಗೂ ಪ್ರಸ್ತುತ ಸಾಲಿನ ತೆರಿಗೆಯನ್ನು ಪಾವತಿ ಮಾಡುತ್ತಿರುತ್ತಾರೆ. ಹಾಗೂ ತೆರಿಗೆ ಪಾವತಿಸದ ಕೆಲವು ಮಾಲೀಕರಿಗೆ ನೋಟೀಸ್ ಜಾರಿ ಮಾಡುವುದಾಗಿ ಸಭೆಗೆ ತಿಳಿಸಿದರು.

**5) <u>ಅರಣ್ಯ ವಿಭಾಗದ ಬಗ್ಗೆ:–</u>**

- ಶ್ರೀರಂಗನಾಥ್ ಮತ್ತು ಶ್ರೀಮತಿ ಪ್ರೇಮ ಸದಸ್ಯರು ರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಗಿಡಗಳನ್ನು ನೆಡುವಂತೆ ಸಭೆಯಲ್ಲಿ ಕೋರಿದರು.
- ಮಾನ್ಯ ನೋಡಲ್ ಅಧಿಕಾರಿಯವರು ಮಾತನಾಡುತ್ತಾ, ಅರಣ್ಯ ಅಧಿಕಾರಿರವರೊಂದಿಗೆ ಚರ್ಚಿಸಿ ಸೂಕ್ತ ಕ್ರಮ ವಹಿಸುವಂತೆ ಕಾರ್ಯದರ್ಶಿಗಳಿಗೆ ಸಭೆಯಲ್ಲಿ ತಿಳಿಸಿದರು.

**6) <u>ವಿದ್ಯುತ್ ವಿಭಾಗದ ಬಗ್ಗೆ:–</u>**

- ಶ್ರೀ ದೇವರಾಜು ಮತ್ತು ಶ್ರೀಮತಿ ಪ್ರೇಮ ಸಮಿತಿ ಸದಸ್ಯರು ರವರು ಮಾತನಾಡುತ್ತಾ, ಮಾರಮ್ಮ ದೇವಸ್ಥಾನದ ರಸ್ತೆಯಲ್ಲಿ ವಿದ್ಯುತ್ ಕಂಬವು ಬಾಗಿಕೊಂಡಿರುತ್ತದೆ ಮತ್ತು ಸಣ್ಣಕ್ಕಿಬಯಲಿನ 1ನೇ ಮುಖ್ಯರಸ್ತೆ 1ನೇ ಅಡ್ಡರಸ್ತೆಯಲ್ಲಿ ಬೀದಿ ದೀಪ ಇರುವುದಿಲ್ಲ ಇದರಿಂದಾಗಿ ಸಾರ್ವಜನಿಕರಿಗೆ ರಾತ್ರಿ ವೇಳೆಯಲ್ಲಿ ಸಂಚರಿಸಲು ತುಂಬಾ ತೊಂದರೆಯಾಗಿರುತ್ತದೆ. ಆದುದರಿಂದ ತುರ್ತಾಗಿ ಹೊಸದಾಗಿ ಬೀದಿ ದೀಪ ಅಳವಡಿಸುವಂತೆ ಸಭೆಯಲ್ಲಿ ಕೋರಿದರು.
- ಮಾನ್ಯ ನೋಡೆಲ್ ಅಧಿಕಾರಿ ರವರು ಮಾತನಾಡುತ್ತಾ, ಶೀಘ್ರವಾಗಿ ಸ್ಥಳ ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳುವಂತೆ ಸಂಬಂಧಪಟ್ಟವರಿಗೆ ತಿಳಿಸುವಂತೆ ಕಾರ್ಯದರ್ಶೀ ರವರಿಗೆ ಸಭೆಯಲ್ಲಿ ತಿಳಿಸಿದರು.

ಪು.ತಿ.ನೋ.

7) **ಪೊಲೀಸ್ ವಿಭಾಗದ ಬಗ್ಗೆ:-**

- ಶ್ರೀ ದೇವರಾಜು ಮತ್ತು ಶ್ರೀಮತಿ ಪ್ರೇಮ ಸಮಿತಿ ಸದಸ್ಯರು ರವರು ಮಾತನಾಡುತ್ತಾ, ಕೆರೆ ಅಂಗಳ ಮತ್ತು ವೆಲ್ಡಿಂಗ್ ಶಾಪ್ ರಸ್ತೆಗಳಲ್ಲಿ ಮದ್ಯವ್ಯಸನಿಗಳ ಹಾವಳಿಗಳು ಹೆಚ್ಚಾಗಿರುತ್ತದೆ. ಹಾಗೂ ರಸ್ತೆಗಳಲ್ಲಿ ಹೆಣ್ಣು ಮಕ್ಕಳು ತಿರುಗಾಡುತ್ತಿರುವಾಗ, ದಾರಿಹೋಕರಿಗೆ ಕೆಲವೊಂದು ಮದ್ಯವ್ಯಸನಿಗಳು ಹಾಗೂ ಪುಂಡ-ಪೋಕರಿಗಳು ತೊಂದರೆ ಕೊಡುತ್ತಿರುತ್ತಾರೆ ಎಂದು ಸಭೆಯಲ್ಲಿ ದೂರುತ್ತಾ, ಇದರ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳುವಂತೆ ಎಲ್ಲಾ ಸದಸ್ಯರು ಕೋರಿದರು.
- ಸಭೆಯಲ್ಲಿ ಹಾಜರಿದ್ದ ಶ್ರೀ ಪದ್ಮರಾಜು, ಎ.ಎಸ್.ಐ. ಬಸವೇಶ್ವರನಗರ ಪೊಲೀಸ್ ಠಾಣೆ, ರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಪ್ರತಿನಿತ್ಯ ಸೂಕ್ಷ್ಮ ಪ್ರದೇಶಗಳಲ್ಲಿ ಪೊಲೀಸ್ ಸಿಬ್ಬಂದಿ ವರ್ಗದವರಿಂದ ಗಸ್ತು ತಿರುಗಲು ತುರ್ತಾಗಿ ಕ್ರಮ ಕೈಗೊಳ್ಳಲಾಗುವುದೆಂದು ಸಭೆಯಲ್ಲಿ ತಿಳಿಸಿದರು.

8) **ಬಿ.ಡಬ್ಲ್ಯೂ.ಎಸ್.ಎಸ್.ಬಿ. ವಿಭಾಗದ ಬಗ್ಗೆ:-**

- ವಾರ್ಡ್ ಸಮಿತಿ ಸದಸ್ಯರಾದ ಶ್ರೀ ದೇವರಾಜು ಮತ್ತು ಶ್ರೀಮತಿ ಪ್ರೇಮ ರವರು ಮಾತನಾಡುತ್ತಾ, ಶಂಕರ್‌ನಾಗ್ ಬಸ್ ಸ್ಟಾಪ್ ಹತ್ತಿರ ಕುಡಿಯುವ ನೀರಿನ ವಾಲ್ವ್ ಮುಚ್ಚಿಹೋಗಿರುತ್ತದೆ ಮತ್ತು ಸಣ್ಣಕ್ಕಿಬಯಲಿನ 1ನೇ ಮುಖ್ಯರಸ್ತೆ 1ನೇ ಅಡ್ಡರಸ್ತೆಯಲ್ಲಿ ಕುಡಿಯುವ ನೀರು ಕಲುಶಿತಗೊಂಡಿರುತ್ತದೆ ಇದನ್ನು ಸರಿಪಡಿಸುವಂತೆ ಸಭೆಯಲ್ಲಿ ಕೋರಿದರು.
- ಸಭೆಯಲ್ಲಿ ಹಾಜರಿದ್ದ ಶ್ರೀ ಶೇಖರ್ ನಾಯಕ್ ರವರು ಮಾತನಾಡುತ್ತಾ, ಸ್ಥಳ ಪರಿಶೀಲಿಸಿ ಶೀಘ್ರವಾಗಿ ಸೂಕ್ತ ಕ್ರಮ ವಹಿಸುವುದಾಗಿ ಸಭೆಯಲ್ಲಿ ತಿಳಿಸಿದರು.
- ಶ್ರೀ ರಾಜ್‌ಕುಮಾರ್ ಸದಸ್ಯರು ರವರು ಮಾತನಾಡುತ್ತಾ, ಹೊನ್ನಾದೇವಿ ಮೆಡಿಕಲ್ಸ್ ಸ್ಟೋರ್ಸ್ ಮುಂಭಾಗದಲ್ಲಿರುವ ಹಾಲಿ ಇರುವ ಕೊಳವೆ ಬಾವಿಯನ್ನು ದುರಸ್ಥಿ ಮಾಡಿಸಿಕೊಡುವಂತೆ ಸಭೆಯಲ್ಲಿ ಕೋರಿದರು.
- ಶ್ರೀ ರಾಘವೇಂದ್ರ ಕೆ. ಬಿಡಬ್ಲ್ಯೂಎಸ್‌ಎಸ್‌ಬಿ, ಕೊಳವೆ ಬಾವಿ ನಿರ್ವಹಣೆ ಗುತ್ತಿಗೆದಾರರು ರವರು ಮಾತನಾಡುತ್ತಾ, ಶೀಘ್ರವಾಗಿ ದುರಸ್ಥಿಗೊಳಿಸಲು ಕ್ರಮವಹಿಸುವುದಾಗಿ ಸಭೆಯಲ್ಲಿ ತಿಳಿಸಿದರು.

ವಾರ್ಡ್ ಸಂಬಂಧಿಸಿದ ಎಲ್ಲಾ ಇಲಾಖೆಗಳ ಅಧಿಕಾರಿಗಳು ಸಭಾನಡವಳಿಗಳಿಗೆ ಅನುಸಾರವಾಗಿ ತಮ್ಮ ಇಲಾಖೆಗೆ ಸಂಬಂಧಿಸಿದ ದೂರುಗಳನ್ನು ಪಟ್ಟಿ ಮಾಡಿಕೊಂಡು ಸದರಿ ದೂರುಗಳನ್ನು ಸರಿಪಡಿಸಿರುವ ಬಗ್ಗೆ ಅಥವಾ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ದೃಢೀಕೃತ ಮಾಹಿತಿಗಳನ್ನು ತಪ್ಪದೇ **ವಾರ್ಡ್ ಕಮಿಟಿ ವಾರ್ಡ್-102 ವಾಟ್ಸ್ ಆಪ್ ಗ್ರೂಪ್** ನಲ್ಲಿ ಮತ್ತು ಪ್ರತೀ ವಾರ್ಡ್ ಸಮಿತಿ ಸಭೆಯಲ್ಲಿ ವರದಿ ಮಾಡಲು ಸೂಚಿಸುತ್ತಾ, ಸಭೆಯನ್ನು ಮುಕ್ತಾಯ ಗೊಳಿಸಲಾಯಿತು. ಸಭೆಯ ಕೊನೆಯಲ್ಲಿ ಸಮಿತಿ ಕಾರ್ಯದರ್ಶಿ ರವರು ಸಮಿತಿ ಸಭೆಗೆ ಆಗಮಿಸಿರುವ ಎಲ್ಲರಿಗೂ ವಂದಿಸಿದರು.

**ಕಾರ್ಯದರ್ಶಿ**
ಹಾಗೂ ಸಹಾಯಕ ಅಭಿಯಂತರರು,
ವಾರ್ಡ್ ಸಂಖ್ಯೆ-102

**ನೋಡಲ್ ಅಧಿಕಾರಿಗಳು**
ವಾರ್ಡ್ ಸಮಿತಿ, ವಾರ್ಡ್-102

ಪ್ರತಿಯನ್ನು

1. ಮಾನ್ಯ ವಲಯ ವಿಶೇಷ ಆಯುಕ್ತರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿರವರಿಗೆ ಸಲ್ಲಿಸಿದೆ.
2. ಮಾನ್ಯ ಜಂಟಿ ಆಯುಕ್ತರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿರವರಿಗೆ ಸಲ್ಲಿಸಿದೆ.
3. ಮಾನ್ಯ ಮುಖ್ಯ ಅಭಿಯಂತರರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ತಾಂತ್ರಿಕ ಸಹಾಯಕರಿಗೆ ಸಲ್ಲಿಸಿದೆ.
4. ಮಾನ್ಯ ಆರೋಗ್ಯ ಅಧಿಕಾರಿಗಳು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
5. ಮಾನ್ಯ ಅಧೀಕ್ಷಕ ಅಭಿಯಂತರರು, (ಘನತ್ಯಾಜ್ಯ ನಿರ್ವಹಣೆ) ರವರ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ಆಪ್ತ ಸಹಾಯಕರವರಿಗೆ ಸಲ್ಲಿಸಿದೆ.
6. ಮಾನ್ಯ ಅರಣ್ಯಾಧಿಕಾರಿಗಳು, ಅರಣ್ಯ ವಿಭಾಗ ರವರಿಗೆ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ಆಪ್ತ ಸಹಾಯಕರವರಿಗೆ ಸಲ್ಲಿಸಿದೆ.
7. ಮಾನ್ಯ ಅಧೀಕ್ಷಕರು, ತೋಟಗಾರಿಕೆ ಇಲಾಖೆ ರವರ ಅವಗಾಹನೆಗೆ ತರಲು ಹಾಗೂ ಅಗತ್ಯ ಕ್ರಮಕ್ಕಾಗಿ ಸಹಾಯಕರಿಗೆ ಸಲ್ಲಿಸಿದೆ.

ಪು.ತಿ.ನೋ.

8. ವೈದ್ಯಕೀಯ ಆರೋಗ್ಯ ಅಧಿಕಾರಿಗಳು, (ಪಶ್ಚಿಮ ವಲಯ) ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
9. ಕಾರ್ಯಪಾಲಕ ಅಭಿಯಂತರರು, ಮಹಾಲಕ್ಷ್ಮೀಪುರಂ ವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
10. ಕಂದಾಯ ಅಧಿಕಾರಿಗಳು, ಮಹಾಲಕ್ಷ್ಮೀಪುರಂ ವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
11. ಸಹಾಯಕ ಕಾರ್ಯಪಾಲಕ ಅಭಿಯಂತರರು ನಾಗಪುರ ಉಪವಿಭಾಗ ರವರಿಗೆ ಸೂಕ್ತ ಕ್ರಮವಹಿಸಲು ಸಲ್ಲಿಸಿದೆ.
12. ಸಹಾಯಕ ಕಂದಾಯ ಅಧಿಕಾರಿಗಳು ನಾಗಪುರ ಉಪವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
13. ಸಹಾಯಕ ಕಾರ್ಯಪಾಲಕ ಅಭಿಯಂತರರು (ಪರಿಸರ ವಿಭಾಗ) ನಾಗಪುರ ಉಪವಿಭಾಗ ರವರ ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
14. ಸಹಾಯಕ ಕಾರ್ಯಪಾಲಕ ಅಭಿಯಂತರರು, ವಿದ್ಯುತ್ ವಿಭಾಗ ರವರಿಗೆ ಸೂಕ್ತ ಕ್ರಮ ವಹಿಸಲು ಸಲ್ಲಿಸಿದೆ.
15. ಎಲ್ಲಾ ಸಂಬಂಧಪಟ್ಟವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
16. ಕಛೇರಿಯ ಕಡತಕ್ಕೆ.

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

### W-102 ವೃಷಭಾವತಿನಗರ

ದಿನಾಂಕ : 07/08/2021 ಬೆಳಗ್ಗೆ = 10.00 ಘಂಟೆಗೆ

ನೋಡಲ್ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ವಾರ್ಡ್ ಸಮಿತಿ ಸಭೆಯನ್ನು ಹಮ್ಮಿಕೊಳ್ಳಲಾಗಿದ್ದ ಸಭೆಯಲ್ಲಿ ಭಾಗವಹಿಸಿದ ಅಧಿಕಾರಿಗಳು ಹಾಗೂ RWA's ಸದಸ್ಯರುಗಳ ಹಾಜರಾತಿ

| ಕ್ರಮ ಸಂಖ್ಯೆ | ಹೆಸರು | ಪದನಾಮ | ಮೊಬೈಲ್ ಸಂಖ್ಯೆ | ಸಹಿ |
|---|---|---|---|---|
| 1) | ವಿಜಯಶೇಖರ್ | ನೋಡಲ್ ಅಧಿಕಾರಿ | 9448670084 | [signature] 7/8/2021 |
| 2) | ಪ್ರಕಾಶ್ ಜಿ | ಕಾರ್ಯದರ್ಶಿ, W-102 | 9845236847 | [signature] 07/8/2021 |
| 3) | ರಂಗನಾಥ್. H | AEE, Nagapura | 9480685316 | |
| 4) | ~~ಬಾಬು~~ ಗೋವಿಂದ್ ರಾಜುಲು | SHI | 9845512187 | [signature] |
| 5) | ಬಾಬು | JHI | 9632549664 | S. Babu |
| 6) | ಮಂಜುನಾಥ್ ಬಿ.ಆರ್ | TI | 9743557879 | |
| 7) | ಸಿದ್ದರಾಜು | AE, BESCOM | 9449870177 | |
| 8) | ಶೇಖರ್ ನಾಯಕ್ | AE, BWSSB | 984544074 | [signature] |
| 9) | ಲೋಕೇಶ್ | Veterinary | 9480683056 | |
| 10) | ವಿನೋದ್ | Marshal W-102 | 9663084662 | |
| 11) | ಹೇಮಂತ್ ಕುಮಾರ್ | RWA's | 9448362208 | |
| 12) | ಪ್ರೇಮ | —॥— | 9632728915 | Premna |
| 13) | ಸಿದ್ದಗಂಗಮ್ಮ | —॥— | 990239918 | |
| 14) | ಗೌರಮ್ಮ | —॥— | 9740249333 | |
| 15) | ರಾಜ್‌ಕುಮಾರ್ | —॥— | 8553779344 | [signature] |

| ಕ್ರಮ ಸಂಖ್ಯೆ | ಹೆಸರು | ಪದನಾಮ | ಮೊಬೈಲ್ ಸಂಖ್ಯೆ | ಸಹಿ |
|---|---|---|---|---|
| 16) | ಚಂದ್ರಪ್ಪ | RWNS | 9845763281 | [signature] |
| 17) | ದೇವರಾಜು | —11— | 9632584986 | [signature] |
| 18) | ನಿಖಿಲ್ [illegible] | [illegible] | 8744806666 | [signature] |
| 19) | ರಂಗನಾಥ್. C | RWNS | 9341199998 | [signature] |
| 20) | ಹೆಚ್. ವಿಶ್ವರಾಜು. | ಬಸವೇಶ್ವರನಗರ P.S. A.S.I. | 9448709074 | [signature] A.S.I. |
| 21) | Raghavendra. K | BWSSB | 9986449988 | [signature] |
| 22) | ಹರೀಶ್. ಎಂ | T. I | 7411692135 | [signature] |
| 23) | | | | |
| | | | | |